# ಎಸ್ಸಿ-ಎಸ್ಟಿ ಶಿಕ್ಷಣ ಸಂಸ್ಥೆ ಸಮಸ್ಯೆ ಪರಿಹರಿಸಿ

## ಬಸವರಾಜ ಹೊರಟ್ಟಿಗೆ ಡಾ. ಅಂಬೇಡ್ಕರ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಮಾಳಗಿ ಮನವಿ

• **ಕನ್ನಡಪ್ರಭ ವಾರ್ತೆ** ಹಾವೇರಿ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಶಾಲಾ-ಕಾಲೇಜುಗಳ ಆಡಳಿತ ಮಂಡಳಿ ವಿವಿಧ ಸಮಸ್ಯೆಗಳನ್ನು ಪರಿಹರಿಸುವಂತೆ ಒತ್ತಾಯಿಸಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಶಿಗ್ಗಾಂವಿ ಡಾ. ಬಿ.ಆರ್. ಅಂಬೇಡ್ಕರ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಿ.ಎಸ್. ಮಾಳಗಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಶಾಲಾ-ಕಾಲೇಜುಗಳು ವೇತನವಿಲ್ಲದೇ 10-15 ವರ್ಷಗಳಿಂದ ಅಲ್ಲಿಯ ಸಿಬ್ಬಂದಿ ಜೀವನ ನಡೆಸುವುದು ತುಂಬಾ ಕಷ್ಟಕರವಾಗಿತ್ತು. ಈ ಸಮುದಾಯಗಳ ಆಡಳಿತ ಮಂಡಳಿಯ ಮೇಲೆ ಹಾಗೂ ಸಿಬ್ಬಂದಿ ವರ್ಗಗಳ ಮೇಲಿನ ಮಾನವೀಯತೆಯಿಂದ ತಾವೇ ನೂರಾರು ಶಾಲಾ-ಕಾಲೇಜುಗಳಿಗೆ ವೇತನ ಅನುದಾನಕ್ಕೆ ಒಳಪಡಿಸಿದ್ದು ಶ್ಲಾಘನೀಯ. ಆದರೆ ಇಂದಿನ ದಿನಮಾನಗಳಲ್ಲಿ ಎಸ್‌ಸಿ, ಎಸ್‌ಟಿ ಆಡಳಿತ ಮಂಡಳಿಯವರು ಶಾಲಾ-ಕಾಲೇಜುಗಳನ್ನು ನಡೆಸಲು ತೊಂದರೆ ಅನುಭವಿಸುವಂತಾಗಿದೆ ಎಂದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಶಾಲಾ-ಕಾಲೇಜುಗಳ ಕಟ್ಟಡ ಮತ್ತು ಆಟದ ಮೈದಾನಕ್ಕೆ ನಗರ ಪ್ರದೇಶದಲ್ಲಿ ಕನಿಷ್ಠ 20 ಗುಂಟೆ, ಗ್ರಾಮೀಣ ಭಾಗದಲ್ಲಿ ಕನಿಷ್ಠ 1 ಎಕರೆ ಜಮೀನು ಖರೀದಿ ಮಾಡಿಕೊಳ್ಳಲು ಸಂಸ್ಥೆಗೆ ಸಮಾಜ ಕಲ್ಯಾಣ ಇಲಾಖೆಯ ಎಸ್‌ಸಿಪಿ, ಟಿಎಸ್‌ಪಿ ಅನುದಾನದಲ್ಲಿ ಮಂಜೂರಾತಿ ನೀಡಬೇಕು. ಕಟ್ಟಡ ಕಟ್ಟಲಿಕ್ಕೆ ಸರ್ಕಾರದ ಅನುದಾನವನ್ನು ನೇರವಾಗಿ ಸಂಸ್ಥೆಯ ಆಡಳಿತ ಮಂಡಳಿಗೆ ಬಿಡುಗಡೆ ಮಾಡಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಶಾಲಾ, ಕಾಲೇಜುಗಳು ಇರುವ ಸ್ಥಳದಿಂದ ಕನಿಷ್ಠ 10 ಕಿ.ಮೀ. ಅಂತರದಲ್ಲಿ ಯಾವುದೇ ಸರ್ಕಾರಿ ಶಾಲಾ, ಕಾಲೇಜುಗಳನ್ನು ಮಂಜೂರು ಮಾಡಬಾರದು ಎಂದು ಒತ್ತಾಯಿಸಿದರು.



ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಶಿಗ್ಗಾಂವಿ ಡಾ. ಬಿ.ಆರ್. ಅಂಬೇಡ್ಕರ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಿ.ಎಸ್. ಮಾಳಗಿ ಮನವಿ ಸಲ್ಲಿಸಿದರು.

1988-89ರಲ್ಲಿ ಪ್ರಾರಂಭಿಸಿದ ಶಾಲಾ-ಕಾಲೇಜುಗಳಿಗೆ ಕೇವಲ ಒಂದು ಸಿಪಾಯಿ ಹುದ್ದೆಯನ್ನು ಮಂಜೂರು ಮಾಡಿದ್ದಾರೆ. ಆದರೆ ಅಂದಿನ ಕಾಲದಲ್ಲಿ ಮಂಜೂರಿ ಇದ್ದ ಅಟೆಂಡರ್, ಕಾವಲುಗಾರ ಇವರ ಹುದ್ದೆಯನ್ನು ವೇತನ ಅನುದಾನಕ್ಕೆ ಒಳಪಡಿಸಬೇಕು. ತಾವೇ ಸರ್ಕಾರಕ್ಕೆ ಶಿಫಾರಸು ಮಾಡಿದ ಕಾಲ್ಪನಿಕ ವೇತನದ ವರದಿ ಯಥಾವತ್ತಾಗಿ ಜಾರಿಗೊಳಿಸಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಶಾಲಾ, ಕಾಲೇಜುಗಳಲ್ಲಿ ನಿವೃತ್ತಿ ಮತ್ತು ಮೃತಪಟ್ಟ ಹುದ್ದೆಗಳನ್ನು ತುಂಬಿಕೊಳ್ಳಲು ಶಿಕ್ಷಣ ಆಡಳಿತ ಮಂಡಳಿಗೆ ಮಂಜೂರಾತಿ ನೀಡಬೇಕು. ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳನ್ನು ಶಾಲೆಗೆ ಕರೆತರಲು ಮಿನಿ ಬಸ್ ಮಂಜೂರಾತಿ ಮಾಡಬೇಕು. 1988-89ರಲ್ಲಿ ಆಡಳಿತ ಮಂಡಳಿಯವರು ನೇಮಕಾತಿ ಮಾಡಿಕೊಂಡ ಸಿಬ್ಬಂದಿಗೆ ನಿವೃತ್ತಿ ವೇತನ ಮಂಜೂರು ಮಾಡಿಸಬೇಕು ಎಂದು ಕೋರಿದರು.

ಸಿದ್ದಬಸಪ್ಪ ಯಾದವ, ಕೆ.ಎಂ. ಸುಂಕದ, ಸುನೀಲ ದಂಡೆಮ್ಮನವರ, ಮಾಲತೇಶ ಬೇವಿನಹಿಂಡಿ ಇತರರು ಇದ್ದರು.

> **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಶಾಲಾ-ಕಾಲೇಜುಗಳ ಕಟ್ಟಡ ಮತ್ತು ಆಟದ ಮೈದಾನಕ್ಕೆ ನಗರ ಪ್ರದೇಶದಲ್ಲಿ ಕನಿಷ್ಠ 20 ಗುಂಟೆ, ಗ್ರಾಮೀಣ ಭಾಗದಲ್ಲಿ ಕನಿಷ್ಠ 1 ಎಕರೆ ಜಮೀನು ಖರೀದಿ ಮಾಡಿಕೊಳ್ಳಲು ಸಂಸ್ಥೆಗೆ ಸಮಾಜ ಕಲ್ಯಾಣ ಇಲಾಖೆಯ ಎಸ್‌ಸಿಪಿ, ಟಿಎಸ್‌ಪಿ ಅನುದಾನದಲ್ಲಿ ಮಂಜೂರಾತಿ ನೀಡಬೇಕು.**
>
> **• ಡಿ.ಎಸ್. ಮಾಳಗಿ**
> ಅಂಬೇಡ್ಕರ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ

# ವಿದ್ಯಾರ್ಥಿಗಳಿಗೆ ಜ್ಞಾನದೊಂದಿಗೆ ಜೀವನ ಮೌಲ್ಯ ಕಲಿಸಬೇಕು

## ಶಿಕ್ಷಕರಿಗೆ ಸಲಹೆ ನೀಡಿದ ಸಭಾಪತಿ ಬಸವರಾಜ ಹೊರಟ್ಟಿ

• **ಕನ್ನಡಪ್ರಭ ವಾರ್ತೆ** ಹಾವೇರಿ

ವಿದ್ಯಾರ್ಥಿಗಳಿಗೆ ಜ್ಞಾನದ ಜತೆಗೆ ಜೀವನ ಮೌಲ್ಯಗಳ ಬೆಳೆಸಲು ಉತ್ತಮ ಮಾರ್ಗದರ್ಶನ ನೀಡಿ, ಸರ್ವತೋಮುಖ ಬೆಳವಣಿಗೆಗೆ ಶಿಕ್ಷಕರು ಶ್ರಮಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ತಾಲೂಕಾ ಘಟಕಗಳ ಸಹಯೋಗದಲ್ಲಿ ನಗರದ ಗೆಳೆಯರ ಬಳಗ ಪ್ರೌಢಶಾಲೆ ಆವರಣದಲ್ಲಿ ಸೋಮವಾರ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಿ ಶಿಕ್ಷಕರು ತಮಗೆ ಏರ್ಪಡಿಸಿದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಶಿಕ್ಷಣ ಸಂಸ್ಥೆಗಳು, ಶಿಕ್ಷಣ ಇಲಾಖೆ, ಶಿಕ್ಷಕರು ಒಂದು ಕುಟುಂಬದಂತೆ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಸರ್ಕಾರದಿಂದ ವೇತನ ಪಡೆಯುವ ಪ್ರತಿಯೊಬ್ಬ ಶಿಕ್ಷಕನ ಮೇಲೂ ಸಮಾಜದ ಋಣವಿದೆ. ಆ ಋಣವನ್ನು ತೀರಿಸಲು ಮಕ್ಕಳಿಗೆ ಉತ್ತಮವಾದ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಸಂಸ್ಕಾರ ಹಾಗೂ ಶಿಕ್ಷಣ ಒಂದು ನಾಣ್ಯದ ಎರಡು ಮುಖಗಳು ಇದ್ದಂತೆ.

ವಿದ್ಯಾರ್ಥಿಗಳು ಜ್ಞಾನದ ಜತೆಗೆ ಸಂಸ್ಕಾರ ಕಲಿಯಬೇಕು. ತಂದೆ-ತಾಯಿಗಳ ಶ್ರಮವನ್ನು ನೆನಪಿಸಿಕೊಂಡು ವಿದ್ಯಾಭ್ಯಾಸ ಮಾಡಬೇಕು. ತಂದೆ-ತಾಯಿಯನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ಹೇಳಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಅಂದಾನೆಪ್ಪ ವಡಗೇರಿ ಮಾತನಾಡಿ, ಕೋವಿಡ್ ಸಂದರ್ಭದಲ್ಲೂ ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ಪರಿಶ್ರಮದಿಂದ ಜಿಲ್ಲೆಯ 15 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಕೋವಿಡ್ ಸಂದರ್ಭದಲ್ಲಿ ವಿದ್ಯಾರ್ಥಿಗಳ ಕಲಿಕೆ ಹಾವೇರಿ ತಾಲೂಕಿನಲ್ಲಿ ಪರಿಚಯಿಸಲಾದ ವರದಾ ಜ್ಞಾನವಾಹಿನಿ ಯೂಟ್ಯೂಬ್ ಚಾನಲ್ ಜಿಲ್ಲಾದ್ಯಂತ ವಿಸ್ತರಿಸಿ ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲ ಮಾಡಿಕೊಡಲಾಗುವುದು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಚ್. ಪಾಟೀಲ ಮಾತನಾಡಿ, ಶಿಕ್ಷಕರು ಇನ್ನೂ ಹೆಚ್ಚು ಶ್ರಮ ವಹಿಸಿ ಶಿಕ್ಷಣದ ಗುಣಮಟ್ಟ ಹೆಚ್ಚಿಸುವಂತಹ ಕೆಲಸವನ್ನು ಮಾಡಲಾಗುವುದು ಎಂದು ತಿಳಿಸಿದರು.

ಡಿಡಿಪಿಯು ಉಮೇಶ, ಶಿಕ್ಷಕರ ಸಂಘದ ಪದಾಧಿಕಾರಿ ಎಂ.ಬಿ. ರಮೇಶ, ಎಚ್.ಪಿ. ಬಣಕಾರ, ಅಭಿವೃದ್ಧಿ ಉಪನಿರ್ದೇಶಕ ಝಡ್.ಎಂ. ಖಾಜಿ, ಜಿ.ಆರ್. ಭಟ್, ಎನ್.ಐ. ಇಚ್ಚಂಗಿ, ಎಂ.ಎಸ್. ಕೆಂಚನಗೌಡ್ರ, ಸುರೇಶ ಮೂಡಲದವರ, ಎಂ.ಎಸ್. ಮರಿಗೌಡ್ರ, ಎನ್.ಎನ್. ಕುಂದೂರ, ಸಾಹಿತಿ ಸತೀಶ ಕುಲಕರ್ಣಿ ಇತರರು ಉಪಸ್ಥಿತರಿದ್ದರು.

KP



ಹಾವೇರಿಯ ಗೆಳೆಯರ ಬಳಗ ಪ್ರೌಢಶಾಲೆ ಆವರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸ್ಪೀಕರ್ ಬಸವರಾಜ ಹೊರಟ್ಟಿ ಅವರು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಿದರು.

### ಶಿಕ್ಷಣ ನೀತಿ ಬದಲಾಯಿಸುವುದು ಸರಿಯಲ್ಲ–ಹೊರಟ್ಟಿ

# ಶಾಲೆ ಆರಂಭಿಸುವುದು ಸೂಕ್ತ

• **ಕನ್ನಡಪ್ರಭ ವಾರ್ತೆ** ಹಾವೇರಿ

ಕೊರೋನಾದಿಂದ ಬಂದ್ ಆಗಿದ್ದ ಶಾಲೆಗಳನ್ನು ಪುನಾರಂಭಿಸುವುದು ಸೂಕ್ತ. ಜಿಲ್ಲಾಧಿಕಾರಿ ನೇತೃತ್ವದ ಸಮಿತಿ ರಚನೆ ಮಾಡಿ ಮಕ್ಕಳ ಆರೋಗ್ಯದ ಬಗ್ಗೆ ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ ನೀಡಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಲೆಗಳನ್ನು ಪ್ರಾರಂಭ ಮಾಡುವಂತೆ ಮೊದಲೇ ಹೇಳಿದ್ದೇನೆ. ಕೊರೋನಾದಿಂದ ಶಾಲೆಗಳು ಬಂದ್ ಆದಾಗ ಮಕ್ಕಳು ಮತ್ತು ಶಿಕ್ಷಕರ ಸಂಬಂಧ ಕಡಿತವಾಗಿದೆ. ವಿದ್ಯಾರ್ಥಿಗಳು ಮತ್ತು ಶಾಲೆಯ ಸಂಬಂಧ ತಪ್ಪಬಾರದು. ಅದಕ್ಕಾಗಿ ವಿದ್ಯಾಗಮ ಯೋಜನೆ ಕೂಡ ಬೇಡ ಎಂದು ಹೇಳಿದ್ದೆ. ಹತ್ತತ್ತು ಮಕ್ಕಳನ್ನ ಕೂರಿಸಿ ಪಾಠ ಮಾಡುವಂತೆ ಹೇಳಿದ್ದೆ ಎಂದರು.

ಹೊಸ ಶಿಕ್ಷಣ ಸಚಿವರು ಕೂಡ ಬಂದು ಭೇಟಿಯಾಗಿ ಚರ್ಚಿಸಿದ್ದರು. ಆಗಲೂ ಶಾಲೆ ಆರಂಭಿಸುವಂತೆ ಹೇಳಿದ್ದೇನೆ. ಜಿಲ್ಲಾಧಿಕಾರಿ ನೇತೃತ್ವದಲ್ಲಿ ಶಾಲೆಗಳ ಆರಂಭದ ಬಗ್ಗೆ ಸಮಿತಿ ರಚನೆ ಮಾಡಬೇಕು. ಮಕ್ಕಳಿಗೆ ಏನಾದರೂ ಆದರೆ ಈ ಸಮಿತಿ ಜವಾಬ್ದಾರಿ ತೆಗೆದುಕೊಳ್ಳಬೇಕು. ಜತೆಗೆ, ಪಾಲಕರು ಕೂಡ ಮಕ್ಕಳ ಬಗ್ಗೆ ಜವಾಬ್ದಾರಿ ವಹಿಸಬೇಕು. ಒಟ್ಟಿನಲ್ಲಿ ಶಾಲೆ ಆರಂಭ ಮಾಡುವುದು ಸೂಕ್ತ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

**ಎನ್‌ಇಪಿ ಸರಿಯಿಲ್ಲ:** ಹೊಸ ಶಿಕ್ಷಣ ನೀತಿ ಕುರಿತು ಪ್ರತಿಕ್ರಿಯಿಸಿದ ಅವರು, ಸರ್ಕಾರ ಬದಲಾದಂತೆ ಶಿಕ್ಷಣ ನೀತಿ ಬದಲಾಯಿಸುವುದು ಸರಿಯಲ್ಲ. ಈಗಿನ ಹೊಸ ಶಿಕ್ಷಣ ನೀತಿ ಸರಿಯಿಲ್ಲ. ಹಿಂದಿನ ಶಿಕ್ಷಣ ನೀತಿಯೇ ಸರಿ ಇತ್ತು. ವರದಿಯನ್ನು ವಿಸ್ತೃತವಾಗಿ ಅಧ್ಯಯನ ಮಾಡಿ ಕೆಲವೊಂದು ಬದಲಾವಣೆಗಳನ್ನು ಮಾಡಬೇಕು. ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಪರಿಪೂರ್ಣತೆಯಿಂದ ಕೂಡಿಲ್ಲ. ನಾನು ಹಲವಾರು ದೇಶಗಳನ್ನ ತಿರುಗಿದ್ದೇನೆ. ಅಲ್ಲಿ ಸರ್ಕಾರ ಬದಲಾದಂತೆ ಶಿಕ್ಷಣ ನೀತಿಗಳು ಬದಲಾಗುವುದಿಲ್ಲ. ಸರ್ಕಾರ ಬದಲಾದಂತೆ ನೀತಿ ಬದಲಾದರೆ ಶಿಕ್ಷಣ ವ್ಯವಸ್ಥೆ ಸರಿಯಾಗಿ ಇರಲು ಸಾಧ್ಯವಿಲ್ಲ. ನಮ್ಮ ದೇಶದಲ್ಲಿ ಮೂರು ಹಂತದ ಶಿಕ್ಷಣವೇ ಉತ್ತಮ. ಆದ್ದರಿಂದ ಹಿಂದಿನ ಶಿಕ್ಷಣ ಪದ್ಧತಿಯೇ ಉತ್ತಮವಾಗಿದೆ ಎಂದು ಹೇಳಿದರು.

ಕನ್ನಡಪ್ರಭ Tue, 31 August 2021
https://kpepaper.asianetnews.com/c/62814986